# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : | **1406** |
| ಸದಸ್ಯರ ಹೆಸರು : | ಶ್ರೀ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ : | 30.12.2022 |
| ಉತ್ತರಿಸುವ ಸಚಿವರು : | ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2019-20ನೇ ಸಾಲಿನಿಂದ ಇಲ್ಲಿಯವರೆಗೆ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಹೊಸದಾಗಿ ವಸತಿನಿಲಯಗಳು ಮಂಜೂರಾಗಿವೆಯೇ; ಮಂಜೂರಾಗದಿದ್ದಲ್ಲಿ ಕಾರಣವೇನು; (ಜಿಲ್ಲಾವಾರು ಮಾಹಿತಿ ನೀಡುವುದು) | 2019-20ನೇ ಸಾಲಿನಿಂದ ಇಲ್ಲಿಯವರೆಗೆ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಾದ ಕಲಬುರಗಿ, ಕೊಪ್ಪಳ, ಬಳ್ಳಾರಿ, ವಿಜಯನಗರ, ಯಾದಗಿರಿ, ರಾಯಚೂರು ಮತ್ತು ಬೀದರ್ ಜಿಲ್ಲೆಗಳಲ್ಲಿ ಹೊಸದಾಗಿ ಯಾವುದೇ ವಿದ್ಯಾರ್ಥಿನಿಲಯಗಳು ಮಂಜೂರಾಗಿರುವುದಿಲ್ಲ.<br>ಮುಂದುವರೆದು, ಪ್ರಸಕ್ತ ಸಾಲಿನ ಆಯವ್ಯಯ ಘೋಷಣೆಯನ್ವಯ "ದೀನ್‌ದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿನಿಲಯ" ಯೋಜನೆಯಡಿ ಮೊದಲ ಹಂತದಲ್ಲಿ ಕಲಬುರಗಿ, ಬೆಳಗಾವಿ, ಹುಬ್ಬಳ್ಳಿ-ಧಾರವಾಡ, ಮಂಗಳೂರು ಮತ್ತು ಮೈಸೂರು ಜಿಲ್ಲೆಗಳಲ್ಲಿ ತಲಾ 100 ಸಂಖ್ಯಾಬಲದ ಒಂದು ಬಾಲಕರ ಮತ್ತು ಒಂದು ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಬಾಡಿಗೆ ಕಟ್ಟಡಗಳಲ್ಲಿ ಪ್ರಾರಂಭಿಸಲಾಗಿದ್ದು, ಈ ವಿದ್ಯಾರ್ಥಿ ನಿಲಯಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಪ್ರವೇಶಕ್ಕೆ ಶೇ.30 ರಷ್ಟು ಅನುಪಾತವನ್ನು ನಿಗಧಿಪಡಿಸಲಾಗಿರುತ್ತದೆ.<br>ಬೇಡಿಕೆಗನುಗುಣವಾಗಿ ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿಯು ಆಯಾ ಆರ್ಥಿಕ ವರ್ಷದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆಯನ್ನು ಅವಲಂಭಿಸಿರುತ್ತದೆ. |
| ಆ) | ಕಲ್ಯಾಣ ಕರ್ನಾಟಕ ಜಿಲ್ಲೆಗಳಾದ ಕೊಪ್ಪಳ, ಬಳ್ಳಾರಿ, ವಿಜಯನಗರ, ಯಾದಗಿರಿ, ರಾಯಚೂರು, ಬೀದರ್ ಮತ್ತು ಕಲಬುರ್ಗಿ ಜಿಲ್ಲೆಗಳಲ್ಲಿ ಎಷ್ಟು ವಸತಿನಿಲಯಗಳು ಸ್ವಂತ ಕಟ್ಟಡ ಮತ್ತು ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿವೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಕಲ್ಯಾಣ ಕರ್ನಾಟಕ ಜಿಲ್ಲೆಗಳಾದ ಕೊಪ್ಪಳ, ಬಳ್ಳಾರಿ, ವಿಜಯನಗರ, ಯಾದಗಿರಿ, ರಾಯಚೂರು, ಬೀದರ್ ಮತ್ತು ಕಲಬುರ್ಗಿ ಜಿಲ್ಲೆಗಳಲ್ಲಿ ಸ್ವಂತ ಮತ್ತು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳ ವಿವರ ಕೆಳಕಂಡಂತಿವೆ. |

| ಜಿಲ್ಲೆ | ಸ್ವಂತ ಮತ್ತು ಬಾಡಿಗೆ ಕಟ್ಟಡಗಳಲ್ಲಿರುವ ವಿದ್ಯಾರ್ಥಿನಿಲಯಗಳ ವಿವರ | | | |
|---|---|---|---|---|
| | ಸ್ವಂತ | ಉಚಿತ | ಬಾಡಿಗೆ | ಒಟ್ಟು |
| ಕೊಪ್ಪಳ | 50 | 07 | 10 | 67 |
| ಬಳ್ಳಾರಿ | 34 | 03 | 12 | 49 |
| ವಿಜಯನಗರ | 39 | 05 | 22 | 66 |
| ಯಾದಗಿರಿ | 43 | 0 | 22 | 65 |
| ರಾಯಚೂರು | 53 | 02 | 13 | 68 |
| ಬೀದರ್ | 52 | 02 | 23 | 77 |
| ಕಲಬುರ್ಗಿ | 86 | 04 | 38 | 128 |

| | | |
|---|---|---|
| ಇ) | ವಿದ್ಯಾರ್ಥಿಗಳ ಬೇಡಿಕೆ ಅನುಸಾರ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ವಿಶೇಷವಾಗಿ "ಮಾದರಿ ವಸತಿ ನಿಲಯಗಳನ್ನು" ನಿರ್ಮಿಸಲಾಗುವುದೇ; ಇಲ್ಲದಿದ್ದಲ್ಲಿ ಕಾರಣಗಳೇನು; | ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿ ಪ್ರಸ್ತುತ ಒಟ್ಟು 128 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಬೇಡಿಕೆಗನುಗುಣವಾಗಿ ಹಾಗೂ ಆಯವ್ಯಯದಲ್ಲಿ ಒದಗಿಸುವ ಅನುದಾನದ ಲಭ್ಯತೆಯನುಸಾರ ಹೊಸ ವಿದ್ಯಾರ್ಥಿನಿಲಯಗಳ ಮಂಜೂರು ಮಾಡುವ ಬಗ್ಗೆ ಪರಿಶೀಲಿಸಲಾಗುವುದು. |
| ಈ) | 25% ಹೆಚ್ಚುವರಿ ವಿದ್ಯಾರ್ಥಿಗಳ ಸಂಖ್ಯಾಬಲ ಜಾಸ್ತಿ ಮಾಡಿರುವುದರ ಜೊತೆಗೆ ಅವಶ್ಯಕತೆ ಅನುಸಾರ ಜಿಲ್ಲಾ ಕೇಂದ್ರದಲ್ಲಿ ಹೊಸದಾಗಿ ವಸತಿ ನಿಲಯಗಳನ್ನು ನಿರ್ಮಿಸಲಾಗಿದೆಯೇ; ಇಲ್ಲದಿದ್ದಲ್ಲಿ ಕಾರಣವೇನು? (ವಿವರ ನೀಡುವುದು) ಸದರಿ ಹೆಚ್ಚುವರಿ ವಿದ್ಯಾರ್ಥಿಗಳಿಗೆ | ಸರ್ಕಾರದ ಆದೇಶದ ಸಂಖ್ಯೆ: ಹಿಂವಕ 417 ಬಿಎಂಎಸ್ 2022, ದಿನಾಂಕ: 16.09.2022 ರ ಆದೇಶದನ್ವಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಸ್ಥಳಾವಕಾಶ ಲಭ್ಯವಿರುವ ಹಾಗೂ ಸುಸಜ್ಜಿತ ಮೂಲಭೂತ ಸೌಕರ್ಯ ಹೊಂದಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಸಂಖ್ಯಾಬಲವನ್ನು ಶೇ.25ರಷ್ಟು ಹೆಚ್ಚಳ ಮಾಡಿದ್ದು ರಾಜ್ಯದಲ್ಲಿ ಹೆಚ್ಚುವರಿಯಾಗಿ ಒಟ್ಟು 30,000 ವಿದ್ಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಲು ಅನುಮತಿ ನೀಡಿ ಆದೇಶಿಸಲಾಗಿರುತ್ತದೆ.<br>ಸದರಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಹೆಚ್ಚುವರಿ ವಿದ್ಯಾರ್ಥಿಗಳಿಗೆ ಭೋಜನಾ ವೆಚ್ಚ, ಶುಚಿ ಮತ್ತು ಸಿರಿಗಂಧ ಕಿಟ್ ಗಳು, ಜಮಖಾನೆ-ಬೆಡ್‌ಶಿಟ್‌ಗಳನ್ನು ಒದಗಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ.<br>ಪ್ರಸಕ್ತ ಸಾಲಿನ ಆಯವ್ಯಯ ಘೋಷಣೆಯನ್ವಯ "ದೀನ್ ದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿನಿಲಯ" ಯೋಜನೆಯಡಿ ಮೊದಲ ಹಂತದಲ್ಲಿ ಬೆಳಗಾವಿ, ಹುಬ್ಬಳ್ಳಿ-ಧಾರವಾಡ, ಕಲಬುರ್ಗಿ ಮಂಗಳೂರು ಮತ್ತು ಮೈಸೂರು ಜಿಲ್ಲೆಗಳಲ್ಲಿ ತಲಾ 100 ಸಂಖ್ಯಾಬಲದ ಒಂದು ಬಾಲಕರ ಮತ್ತು ಒಂದು ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಬಾಡಿಗೆ ಕಟ್ಟಡಗಳಲ್ಲಿ ಪ್ರಾರಂಭಿಸಲಾಗಿದ್ದು, ಈ ವಿದ್ಯಾರ್ಥಿನಿಲಯಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಪ್ರವೇಶಕ್ಕೆ ಶೇ.30 ರಷ್ಟು ಅನುಪಾತವನ್ನು ನಿಗಧಿಪಡಿಸಲಾಗಿರುತ್ತದೆ.<br>ಪ್ರಸಕ್ತ ಸಾಲಿಗೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೊಪ್ಪಳ ಜಿಲ್ಲೆಯ ಕೊಪ್ಪಳ ಟೌನ್ ಗೆ ತಲಾ 100 ಸಂಖ್ಯಾಬಲದ ಮೆಟ್ರಿಕ್-ನಂತರದ ವೃತ್ತಿಪರ ಬಾಲಕರ ಮತ್ತು ನರ್ಸಿಂಗ್ ಬಾಲಕಿಯರ ವಿದ್ಯಾರ್ಥಿನಿಲಯ, ಕಲಬುರ್ಗಿ ಜಿಲ್ಲೆ, ಕಲಬುರ್ಗಿ ತಾಲ್ಲೂಕಿನ ಖಣದಾಳ ಗ್ರಾಮದಲ್ಲಿ 100 ಸಂಖ್ಯಾಬಲದ ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯಗಳ ಬೇಡಿಕೆಯಿದ್ದು, ಆಯವ್ಯಯದ ಲಭ್ಯತೆಯನುಸಾರ ಹೊಸ ವಿದ್ಯಾರ್ಥಿನಿಲಯ ಮಂಜೂರು ಮಾಡಲು ಪರಿಶೀಲಿಸಲಾಗುವುದು. |

**ಸಂಖ್ಯೆ**:ಹಿಂವಕ 834 ಬಿಎಂಎಸ್ 2022

**(ಕೋಟ ಶ್ರೀನಿವಾಸ ಪೂಜಾರಿ)**
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು